# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1250 |
| ಸದಸ್ಯರ ಹೆಸರು | ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 26-2-2018 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವರ್ಗ 3 'ಎ' ಗುಂಪಿಗೆ ಸೇರಿದ ಒಕ್ಕಲಿಗ ಜನಾಂಗದವರಿಗೆ ನಗರ ಪ್ರದೇಶದಲ್ಲಿ ಓ.ಬಿ.ಸಿ ಪ್ರಮಾಣ ಪತ್ರ ನೀಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಸರ್ಕಾರದ ಪತ್ರ ಸಂ: NCBC/5/11/Misc/2014-RW, Dated:12.3.2014ರ ಪತ್ರದಲ್ಲಿನ ಕರ್ನಾಟಕ ರಾಜ್ಯದ ಇತರೆ ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯಲ್ಲಿ (Central list of OBCs for the State of Karnataka) ಒಕ್ಕಲಿಗ, ವಕ್ಕಲಿಗ, ಸರ್ಪವಕ್ಕಲಿಗ (ಗ್ರಾಮಾಂತರ ಪ್ರದೇಶಕ್ಕೆ ಮಾತ್ರ) ಎಂದು ನಮೂದಿಸಲಾಗಿದೆ. ಅದರಂತೆ ಜಾತಿ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರದ ಶೈಕ್ಷಣಿಕ ಮತ್ತು ಉದ್ಯೋಗ ಮೀಸಲಾತಿ ಸೌಲಭ್ಯ ಪಡೆಯಲು ಗ್ರಾಮೀಣ ಪ್ರದೇಶದ ಒಕ್ಕಲಿಗ ಜನಾಂಗಕ್ಕೆ ಮಾತ್ರ ನೀಡಲಾಗುತ್ತಿದೆ. ಹೀಗಾಗಿ ನಗರ ಪ್ರದೇಶದ ಒಕ್ಕಲಿಗ ಜನಾಂಗಕ್ಕೆ ಓ.ಬಿ.ಸಿ ಪ್ರಮಾಣ ಪತ್ರವನ್ನು ನೀಡಲಾಗುತ್ತಿಲ್ಲ. |
| ಆ) | ನಗರದಲ್ಲಿ ವಾಸಿಸುವ ಒಕ್ಕಲಿಗ ಜನಾಂಗವು ಶಿಕ್ಷಣ ಹಾಗೂ ಉದ್ಯೋಗ ಮೀಸಲಾತಿ ಸೌಲಭ್ಯ ಹಾಗೂ ಕೇಂದ್ರ ಓ.ಬಿ.ಸಿ ಪಟ್ಟಿಯಲ್ಲಿ ಸೇರ್ಪಡೆಯಾಗಬೇಕಾದರೆ ಇರುವ ಮಾನದಂಡವೇನು; | ನಗರದಲ್ಲಿ ವಾಸಿಸುವ ಒಕ್ಕಲಿಗ ಜನಾಂಗವು ಶಿಕ್ಷಣ ಹಾಗೂ ಉದ್ಯೋಗ ಮೀಸಲಾತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ ಓಬಿಸಿ ಪಟ್ಟಿಯಲ್ಲಿ ಸೇರ್ಪಡೆಯಾಗಬೇಕಾದರೆ, ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ, ನವದೆಹಲಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕಾಗಿರುತ್ತದೆ. ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗವು ಇಂತಹ ಮನವಿಗಳನ್ನು ಬಹಿರಂಗ ವಿಚಾರಣೆಯ ಮೂಲಕ ಪರಿಶೀಲಿಸಿ, ಅರ್ಹ ಜಾತಿಗಳನ್ನು ಮೀಸಲಾತಿ ಪಟ್ಟಿಗೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತದೆ. ಕೇಂದ್ರದ ಓಬಿಸಿ ಪಟ್ಟಿಗೆ ಸೇರಿಸುವ ಕುರಿತಂತೆ ಶಿಫಾರಸ್ಸು ಮಾಡುವ ಅಧಿಕಾರವು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಇರುವುದಿಲ್ಲ. ಆದ್ದರಿಂದ ನಗರ ಒಕ್ಕಲಿಗ ಜನಾಂಗವನ್ನು ಕೇಂದ್ರ ಸರ್ಕಾರದ ಓ.ಬಿ.ಸಿ ಮೀಸಲಾತಿ ಪಟ್ಟಿಗೆ ಸೇರಿಸುವಂತೆ ಒಕ್ಕಲಿಗ ಜನಾಂಗವು ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗವನ್ನು ಸಂಪರ್ಕಿಸಬೇಕಾಗಿದೆ. |

| | | |
|---|---|---|
| ಇ) | ನಗರದಲ್ಲಿ ವಾಸಿಸುವ ಒಕ್ಕಲಿಗ ಜನಾಂಗವು ಶಿಕ್ಷಣ ಮತ್ತು ಉದ್ಯೋಗ ಮೀಸಲಾತಿ ಸೌಲಭ್ಯದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು; | ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ 30.03.2002 ರಲ್ಲಿನ ಜಾತಿ ಮೀಸಲಾತಿ ಪಟ್ಟಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿನ ಒಕ್ಕಲಿಗ ಜನಾಂಗವು ಶಿಕ್ಷಣ ಮತ್ತು ಉದ್ಯೋಗ ಮೀಸಲಾತಿ ಸೌಲಭ್ಯವನ್ನು ಪಡೆಯಲು ಪ್ರವರ್ಗ–3 'ಎ' ರಡಿ ಅವಕಾಶ ಕಲ್ಪಿಸಲಾಗಿದೆ. |
| ಈ) | ನಗರದಲ್ಲಿ ವಾಸಿಸುವ ಒಕ್ಕಲಿಗ ಜನಾಂಗದವರನ್ನು ಕೇಂದ್ರದ ಓ.ಬಿ.ಸಿ ಪಟ್ಟಿಗೆ ಸೇರಿಸುವಂತೆ ರಾಜ್ಯ ಸರ್ಕಾರ ಹಾಗೂ ಹಿಂದುಳಿದ ವರ್ಗಗಳ ಆಯೋಗಕ್ಕೆ ಶಿಫಾರಸ್ಸು ಮಾಡುವುದೇ? | ನಗರದಲ್ಲಿ ವಾಸಿಸುವ ಒಕ್ಕಲಿಗ ಜನಾಂಗದವರನ್ನು ಕೇಂದ್ರದ ಓ.ಬಿ.ಸಿ ಪಟ್ಟಿಗೆ ಸೇರಿಸುವಂತೆ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಶಿಫಾರಸ್ಸು ಮಾಡುವ ಅಧಿಕಾರವು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಇರುವುದಿಲ್ಲ. ಆದ್ದರಿಂದ, ನಗರದಲ್ಲಿ ವಾಸಿಸುವ ಒಕ್ಕಲಿಗ ಜನಾಂಗವನ್ನು ಕೇಂದ್ರ ಸರ್ಕಾರದ ಓ.ಬಿ.ಸಿ ಮೀಸಲಾತಿ ಪಟ್ಟಿಗೆ ಸೇರಿಸುವಂತೆ ಒಕ್ಕಲಿಗ ಜನಾಂಗವು ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ, ನವದೆಹಲಿ ಇವರಿಗೆ ಮನವಿಯನ್ನು ಸಲ್ಲಿಸಬೇಕು. |

ಸಂಖ್ಯೆ: ಹಿಂವಕ 63 ಬಿಸಿಎ 2018

(ಹೆಚ್. ಆಂಜನೇಯ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.